2051 (2528) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) :- ಮಾನ್ಯ ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ಗಡಿ ಪ್ರದೇಶದ ಚಾಮರಾಜನಗರ ಜಿಲ್ಲೆಯ ಸೇರಿದಂತೆ ರಾಜ್ಯಾದ್ಯಂತ ಇರುವ ನಿರುದ್ಯೋಗಿಗಳ ಸಂಖ್ಯೆ ಎಷ್ಟು;

ಆ) ನಿರುದ್ಯೋಗ ಸಮಸ್ಯೆಯನ್ನು ಹೋಗಲಾಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ನಿರುದ್ಯೋಗ ಪದವೀಧರರಿಗೆ ಸರ್ಕಾರದ ವತಿಯಿಂದ ಯಾವುದಾದರೂ ಸೌಲಭ್ಯವನ್ನು ಒದಗಿಸಲಾಗುವುದೇ;

ಈ) ಹಾಗಿದ್ದಲ್ಲಿ, ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗುವುದು;

ಉ) ಈ ಸೌಲಭ್ಯಗಳನ್ನು ಯಾವಾಗ ಜನರಿಗೆ ತರಲಾಗುವುದು?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು):

ಅ) 11,16,326. (ಜನವರಿ ಅಂತ್ಯಕ್ಕೆ)

ಆ) ಉದ್ಯೋಗಾಕಾಂಕ್ಷಿಗಳನ್ನು ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ನೋಂದಾಯಿಸಿಕೊಳ್ಳಲಾಗುತ್ತದೆ. ಉದ್ಯೋಗದಾತರು ಕೋರಿದಾಗ ನೋಂದಾಯಿತ ಅಭ್ಯರ್ಥಿಗಳ ಪಟ್ಟಿಯನ್ನು ನೀಡಲಾಗುತ್ತದೆ.

ಉದ್ಯೋಗ ಕಲ್ಪಿಸುವ ಯೋಜನೆಗಳು ಈ ಇಲಾಖೆಯಲ್ಲಿ ಇರುವುದಿಲ್ಲ.

ಇ) ಅಂತಹ ಕಾರ್ಯಕ್ರಮಗಳು ಈ ಇಲಾಖೆಯಲ್ಲಿ ಇಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

2053 (2525) ಶ್ರೀ ವಾಟಾಳ್ ನಾಗರಾಜ್ :- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯು ಸೇರಿದಂತೆ ರಾಜ್ಯಾದ್ಯಂತ ಗಂಗಾ ಕಲ್ಯಾಣ ಯೋಜನೆಯಡಿ ಕೊರೆಯಿಸಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು;